**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ 3469/2021**
**ಚಾಸಾ - 07 / ಪ್ರಾಸಾ - 03**

| | |
|---|---|
| ಹೆಸರು | **ವಿನೋದ್** |
| ತಂದೆಯ ಹೆಸರು | **ಕೃಷ್ಣ ಕೆ. ಎಂ** |
| ವಯಸ್ಸು | **38** |
| ಉದ್ಯೋಗ | **ಚಾಲಕ** |
| ವಿಳಾಸ | **ಚನ್ನೇನಹಳ್ಳಿ** |

ದಿನಾಂಕ:**20-03-2025 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ಈಗ ಸಾಕ್ಷಿಗೆ ನೋಟಿಸ್ ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ನೋಟಿಸ್ ನ್ನು ನಿಪಿ-9 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ನಿಪಿ-3 ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಸುಮಾರು 3 ಹಿಂದೆ ನಾನು ಖಾಸಗಿ ಕೆಲಸದ ನಿಮಿತ್ತ ಪೋಲೀಸ್ ಠಾಣೆಗೆ ಹೋಗಿದ್ದಾಗ, ಪೋಲೀಸರು ನನ್ನಿಂದ ಕೆಲವು ದಾಖಲೆಗಳ ಮೇಲೆ ಸಹಿಯನ್ನು ಪಡೆದುಕೊಂಡರು. ಪೋಲೀಸರು ಯಾವ ಕಾರಣಕ್ಕಾಗಿ ನನ್ನಿಂದ ಸಹಿಯನ್ನು ಪಡೆದುಕೊಂಡರು ಎಂದು ನನಗೆ ಗೊತ್ತಿಲ್ಲ. ನನಗೆ ನಿಪಿ-3 ಮತ್ತು 9 ರಲ್ಲಿ ಇರುವ ವಿಷಯದ ಬಗ್ಗೆ ಯಾವುದೇ ಮಾಡಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೋಲೀಸರು ಯಾವುದೇ ವಾಹನಗಳನ್ನು ವಶಪಡಿಸಿಕೊಂಡಿರುವುದಿಲ್ಲ. ನನ್ನ ಜೊತೆ ನಿಪಿ-3 ಮತ್ತು 9 ಕ್ಕೆ ಯಾರು ಸಹಿಯನ್ನು ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮಖೆವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ದಿ.18-09-2021 ರಂದು ಪೋಲೀಸರು ಅಮಾನತ್ತು ಪಂಚನಾಮೆಗೆ ಸಹಕರಿಸುವಂತೆ ಹೇಳಿ ನಿಮಗೂ ಮತ್ತು ಚಾಸಾ-8 ರವರಿಗೆ ನಿಪಿ-9 ರಂತೆ ನೋಟಿಸ್ ನ್ನು ನೀಡಿದರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಅದೇ ದಿನದಂದು ರಾತ್ರಿ 11 ರಿಂದ 11.45 ರ ಸಮಯದಲ್ಲಿ ತಾವರೆಕೆರೆ ಪೋ. ಠಾಣೆಯ ಆವರಣದಲ್ಲಿ ಪೋಲೀಸರು ನಿಪಿ-3 ರಂತೆ ಅಮಾನತ್ತು ಪಂಚನಾಮೆಯನ್ನು ಮಾಡಿ ನಿಮ್ಮ, ಚಾಸಾ-1 ಮತ್ತು ಚಾಸಾ-8 ರವರ ಸಹಿಯನ್ನು ಪಡೆದುಕೊಂಡರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಪೋಲೀಸರು ಆರೋಪಿಯ ದ್ವಿಚಕ್ರವಾಹನ ಸಂ. ಕೆಎ-41-ಇಕೆ-8931 ಮತ್ತು ಚಾಸಾ-1 ರವರ ರೆಡ್ಡಿ ಮಿ ಮೊಬೈಲ್ ಫೋನ್ ನ್ನು ವಶಪಡಿಸಿಕೊಂಡರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಈಗ ಸಾಕ್ಷಿಗೆ ನಿಪಿ-2 ನ್ನು ತೋರಿಸಿದ್ದು, ಅದನ್ನು ನಿಪಿ-3 ರಂತೆ ಪಂಚನಾಮೆ ಮಾಡುವ ಸಮಯದಲ್ಲಿ ತೆಗೆಯಲಾಗಿದೆ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಸದರಿ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಪಾಟೀ ಸವಾಲುಃ- ಆರೋಪಿಯ ಪರ ಶ್ರೀ. ಜಿ. ಹೆಚ್. ಎಂ , ವಕೀಲರಿಂದಃ-**

ಆರೋಪಿಯ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**

**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ -610/2016**
**ಚಾಸಾ - 02 / ಪ್ರಾಸಾ - 02**

| | |
|---|---|
| ಹೆಸರು | **ವೆಂಕಟೇಶ್ ಮೂರ್ತಿ** |
| ತಂದೆಯ ಹೆಸರು | **ನರಸಿಂಹಯ್ಯ** |
| ವಯಸ್ಸು | **43** |
| ಉದ್ಯೋಗ | **ಚಾಲಕ** |
| ವಿಳಾಸ | **ಕಲ್ಯ** |

ದಿನಾಂಕ:**20-03-2025** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ಚಾಸಾ-1 ರವರು ನಮ್ಮ ವಾಹನದ ಮಾಲೀಕರು. ನನಗೆ ನ್ಯಾಯಾಲಯದ ಮುಂದೆ ಇರುವ ಆರೋಪಿಯು ಯಾರು ಎಂದು ಗೊತ್ತಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವುದೇ ಚಿಕಿತ್ಸೆಯನ್ನು ಪಡೆದುಕೊಂಡಿರುವುದಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೋಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ಸಾಕ್ಷಿಗೆ ತಾನು ನೀಡಿರುವ ಹೇಳಿಕೆಯ ಭಾಗವಾದ "ನಾನು ಮೇಲ್ಕಂಡ ವಿಳಾಸದಲ್ಲಿ –---------------ಕ್ರಮ ಜರುಗಿಸಬೇಕೆಂದು ಕೋರುತ್ತೇನೆ ” ಓದಿ ತಿಳಿಸಲಾಯಿತು. ಸಾಕ್ಷಿಯು ತಾನು ನೀಡಿರುವ ಹೇಳಿಕೆಯನ್ನು

ಅಲ್ಲಗಳೆದಿರುತ್ತಾರೆ. ಸದರಿ ಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ಸದರಿ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಪಾಟೀ ಸವಾಲುಃ- ಆರೋಪಿಯ ಪರ ಶ್ರೀ. ಎನ್. ಜಿ, ವಕೀಲರಿಂದಃ-**

ಆರೋಪಿಯ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**

**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ -**
**ಚಾಸಾ - 01 / ಪ್ರಾಸಾ - 01**

| | |
|---|---|
| ಹೆಸರು | |
| ತಂದೆಯ / ಗಂಡನ ಹೆಸರು | |
| ವಯಸ್ಸು | |
| ಉದ್ಯೋಗ | ವ್ಯವಸಾಯ |
| ವಿಳಾಸ | |

ದಿನಾಂಕಃ **07-03-2024** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ - ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ -**

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

**ಪಾಟೀ ಸವಾಲು - ಆರೋಪಿ ಪರ ಶ್ರೀ.** ವಕೀಲರಿಂದ ಃ-

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಮರು ವಿಚಾರಣೆ- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**

ಸಾಕ್ಷಿಗೆ ಕನ್ನಡ ಬಾಷೆಯು ಬಾರದೇ ಇರುವ ಕಾರಣ ವಕೀಲರಾದ ಶ್ರೀಮತಿ. ಶ್ರುತಿರವರನ್ನು ಅನುವಾದಕರಾಗಿ ನೇಮಕ ಮಾಡಲು ಮಾನ್ಯ ಎಪಿಪಿ ಮತ್ತು ಆರೋಪಿಯ ಪರ ವಕೀಲರು ಸಮ್ಮತಿಸಿರುತ್ತಾರೆ.